## ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ

## ಸಿ.ಸಿ. 617/2021

| | | |
|---|---|---|
| ಹೆಸರು | ಗಿರಿಜಮ್ಮ | ಪಿಡಬ್ಲ್ಯೂ -01<br>ಸಿಡಬ್ಲ್ಯೂ - 01 |
| ಗಂಡನ ಹೆಸರು | ಪರಸಪ್ಪ | |
| ವಯಸ್ಸು | 60 ವರ್ಷ | |
| ಉದ್ಯೋಗ | ಕೂಲಿ ಕೆಲಸ | ದಿ: 13.09.2023 |
| ವಾಸ ಸ್ಥಳ | ದೊಗ್ಗಳ್ಳಿ ಗ್ರಾಮ | |
| ಮುಖ್ಯ ವಿಚಾರಣೆ | ಸಹಾಯಕ ಸರ್ಕಾರಿ ಅಭಿಯೋಜಕರಿಂದ | |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

ದೊಗ್ಗಳ್ಳಿ ಗ್ರಾಮದಲ್ಲಿ ನನಗೆ ಎರಡು ಮನೆಗಳು ಇರುತ್ತವೆ. ಒಂದು ಮನೆಯಲ್ಲಿ ನನ್ನ ಮಗ ಹಾಗೂ ಸೊಸೆ ವಾಸವಾಗಿದ್ದು, ಇನ್ನೊಂದು ಮನೆಯಲ್ಲಿ ನಾನು ವಾಸವಾಗಿದ್ದೇನೆ.

2. ಈಗ ಸುಮಾರು 3 ವರ್ಷಗಳ ಹಿಂದೆ ನನ್ನ ಮಗ ಹಾಗೂ ಸೊಸೆ ಊರಿಗೆ ಹೋಗಿದ್ದರಿಂದ ನಾನು ನನ್ನ ಮನೆಯಲ್ಲಿ ರಾತ್ರಿ ಊಟ ಮಾಡಿಕೊಂಡು ಮನೆಗೆ ಬೀಗ ಹಾಕಿಕೊಂಡು ನನ್ನ ಮಗ ಹಾಗೂ ಸೊಸೆ ವಾಸವಾಗಿದ್ದ ಮನೆಗೆ ಹೋಗಿರುತ್ತೇನೆ. ಮರುದಿನ ಬೆಳಿಗ್ಗೆ ನನ್ನ ಮನೆಗೆ ಬಂದು ನೋಡಿದಾಗ ನನ್ನ ಮನೆಯ ಬಾಗಿಲಿಗೆ ಹಾಕಿದ್ದ ಬೀಗ ಹೊಡೆದಿದ್ದು, ಒಳಗೆ ಹೋಗಿ ನೋಡಲಾಗಿ ಕೋಣೆಯಲ್ಲಿದ್ದ ಬೀರುವಿನ ಬಾಗಿಲು ಸಹ ಹೊಡೆದಿದ್ದು, ಅದರಲ್ಲಿ ಇಟ್ಟಿದ್ದ 7 ಬೆಳ್ಳಿಯ ಬ್ರಾಸ್ ಲೈಟ್ ಗಳು, ಬಂಗಾರದ ಕಿವಿಯಲ್ಲಿ ಹಾಕಿಕೊಳ್ಳುವ ಬಟನ್ ಜುಮುಕಿ, ಜಾಲರಿ ಮತ್ತು ರೂ.200/-ಹಣವನ್ನು ಯಾರೋ ಕಳ್ಳರು ನಮ್ಮ ಮನೆಗೆ ನುಗ್ಗಿ ಕಳ್ಳತನ ಮಾಡಿಕೊಂಡು ಹೋಗಿದ್ದರು. ನಂತರ ನಾನು ಪೊಲೀಸ್ ಠಾಣೆಗೆ ಹೋಗಿ ನಮ್ಮ ಮನೆಯಲ್ಲಿ ಕಳ್ಳತನವಾದ ವಿಚಾರವಾಗಿ ದೂರು ಕೊಟ್ಟಿರುತ್ತೇನೆ. ಈಗ ನೋಡುತ್ತಿರುವ ದೂರಿನಲ್ಲಿರುವ ಸಹಿ ನನ್ನದ್ದು. ಸದರಿ ದೂರನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

3. ದೂರನ್ನು ಕೊಟ್ಟ ನಂತರ ಪೊಲೀಸರು ನಮ್ಮ ಮನೆಗೆ ಬಂದು ಮಹಜರು ಮಾಡಿಕೊಂಡು ಹೋಗಿದ್ದು, ಆ ಸಮಯದಲ್ಲಿ ನಾನು ಹಾಜರಿದ್ದು, ನಮ್ಮ ಮನೆಯಲ್ಲಿ ಕಳ್ಳತನವಾದ ಬಗ್ಗೆ ಪೋಟೋವನ್ನು ತೆಗೆದಿರುತ್ತಾರೆ. ಮಹಜರಿಗೆ ನಾನು ಸಹ ಸಹಿ ಹಾಕಿರುತ್ತೇನೆ. ಮಹಜರನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು

ಗುರುತಿಸಲಾಯಿತು.

4. ನಮ್ಮ ಮನೆ ಕಳ್ಳತನವಾದ 15 ದಿನಗಳ ನಂತರ ಪೊಲೀಸರು 3 ಜನ ಆಸಾಮಿಗಳನ್ನು ನಮ್ಮ ಮನೆಗೆ ಕರೆದುಕೊಂಡು ಬಂದಿದ್ದು, ಸದರಿ ಆಸಾಮಿಗಳು ನಮ್ಮ ಮನೆಯಲ್ಲಿ ಕಳ್ಳತನ ಮಾಡಿದ ಬಗ್ಗೆ ಪೊಲೀಸರಿಗೆ ತೋರಿಸಿರುತ್ತಾರೆ. ನಮ್ಮ ಮನೆಯಲ್ಲಿ ಕಳ್ಳತನವಾದ ಆಭರಣಗಳ ಬಗ್ಗೆ ಪೊಲೀಸರಿಗೆ ವಿಚಾರಿಸಿದಾಗ 3 ಕೈಚೈನುಗಳು ಸಿಕ್ಕಿದ್ದು, ಅವುಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇವೆ ಎಂದು ತಿಳಿಸಿರುತ್ತಾರೆ, ಅವುಗಳನ್ನು ನೋಡಿದರೆ ಗುರುತಿಸುತ್ತೇನೆ. ಈಗ ನೋಡುತ್ತಿರುವ ಪೋಟೋಗಳಲ್ಲಿ ಕಾಣುತ್ತಿರುವ ಬೆಳ್ಳಿಯ ಕೈ ಚೈನುಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸದರಿ ಪೋಟೋಗಳನ್ನು ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು. ಸದರಿ ನಮ್ಮ ಮನೆಯಲ್ಲಿ ಕಳ್ಳತನ ಮಾಡಿದ ವ್ಯಕ್ತಿಗಳನ್ನು ನೋಡಿದರೆ ಗುರುತಿಸಲು ಆಗುವುದಿಲ್ಲ ಏಕೆಂದರೆ ಸದರಿ ದಿನ ಅವರು ಮುಖ ಗವಸು ಧರಿಸಿದ್ದರು.

5. ಸಾಕ್ಷಿಗೆ ಒಂದು ಪೋಟೋವನ್ನು ತೋರಿಸಿ, ಅದರಲ್ಲಿರುವ 2 ನೇ ಆರೋಪಿ ಇರುವ ಬಗ್ಗೆ ಸಾಕ್ಷಿ ನೋಡಿ ಗುರುತಿಸಿದ್ದು, ಸದರಿ ಪೋಟೋವನ್ನು ನಿಪಿ-5 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 1 ನೇ ಆರೋಪಿ ಪರ ವಕೀಲರಿಂದಃ**

6. ನನಗೆ ಈ ಪ್ರಕರಣದ ಬಗ್ಗೆ ಖುದ್ದು ಮಾಹಿತಿ ಇರುವುದಿಲ್ಲ ಎಂದರೆ ಸರಿಯಲ್ಲ. ದೂರಿನಲ್ಲಿ ಬರೆದಿರುವ ಸಂಗತಿಗಳು ನನಗೆ ಗೊತ್ತಿಲ್ಲ, ಪೊಲೀಸರು ಹೇಳಿದ್ದಕ್ಕೆ ನಾನು ನಿಪಿ-1 ಕ್ಕೆ ಸಹಿ ಹಾಕಿರುತ್ತೇನೆ ಎಂದರೆ ಸಾಕ್ಷಿಯು ಸರಿ ಎಂದು ನುಡಿದು, ನಮ್ಮ ಮನೆ ಕಳ್ಳತನವಾದ ವಿಷಯ ಬರೆದಿರುತ್ತಾರೆ ಎಂದು ನುಡಿಯುತ್ತಾರೆ. ನಮ್ಮ ಮನೆಗೆ ಹೊಂದಿಕೊಂಡು ಅಕ್ಕಪಕ್ಕದಲ್ಲಿ ಸಾಕಷ್ಟು ಮನೆಗಳು ಇರುತ್ತವೆ ಎಂದರೆ ಸರಿ. ರಾತ್ರಿ 11.00 ಗಂಟೆಯವರೆಗೆ ಎಚ್ಚರವಿರುತ್ತಾರೆ ಎಂದರೆ ಸರಿ. ನಮ್ಮ ಮನೆಯಲ್ಲಿ ಏನೇ ಶಬ್ದವಾದರೂ ಪಕ್ಕದ ಮನೆಯವರಿಗೆ ಕೇಳಿಸುತ್ತದೆ ಎಂದರೆ ಸರಿ. ನಮ್ಮ ಮನೆಯ ಎದುರುಗಡೆ ಸರ್ಕಲ್ ಇರುತ್ತದೆ ಎಂದರೆ ಸರಿ. ಸದರಿ ಸರ್ಕಲ್ ನಲ್ಲಿ ಯಾವಾಗಲೂ ಹಗಲು ಮತ್ತು ರಾತ್ರಿ ವಾಹನಗಳು ಹಾಗೂ ಜನರು ಓಡಾಡುತ್ತಿರುತ್ತಾರೆ ಎಂದರೆ ಸರಿ. ಸಾಮಾನ್ಯವಾಗಿ ಮನೆಗೆ ಬೀಗ ಹಾಕಿಕೊಂಡು ಹೊರಗೆ ಹೋಗುವಾಗ ಅಕ್ಕಪಕ್ಕದ ಮನೆಯವರಿಗೆ ಹೇಳಿ ಹೋಗುತ್ತಾರೆ ಎಂದರೆ ಸರಿ. ನಾನು ಆರೋಪಿತರನ್ನು ಈ ಮುಂಚೆ ಎಲ್ಲಿಯೂ ನೋಡಿಲ್ಲ, ಇದೇ ಮೊದಲ ಬಾರಿಗೆ ಪೋಟೋದಲ್ಲಿ 2 ನೇ ಆರೋಪಿಯನ್ನು ನೋಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-5 ರಲ್ಲಿ ನಾನು ಇರುವುದಿಲ್ಲ ಎಂದರೆ ಸರಿ ಆದರೆ ನನ್ನ ಮಗ ಇರುತ್ತಾನೆ.

7. ನಿಪಿ–3 ಮತ್ತು 4 ರಲ್ಲಿ ಕಾಣುತ್ತಿರುವ ಬೆಳ್ಳಿಯ ಬ್ರಾಸ್ ಲೈಟ್ ಗಳು ಸಾಕಷ್ಟು ಸಿಗುತ್ತವೆ ಎಂದರೆ ಸರಿ. ಆರೋಪಿತರಿಗೂ ಮತ್ತು ಈ ಪ್ರಕರಣಕ್ಕೂ ಯಾವುದೇ ರೀತಿಯ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿತರು ನಮ್ಮ ಮನೆಯಲ್ಲಿ ಯಾವುದೇ ಕಳ್ಳತನ ಮಾಡದೇ ಇದ್ದರೂ ಸಹ ಪೊಲೀಸರು ಆರೋಪಿತರ ವಿರುದ್ದ ಸುಳ್ಳು ಪ್ರಕರಣ ದಾಖಲಿಸಿದ್ದು, ನಾನು ಪೊಲೀಸರ ಮಾತು ಕೇಳಿಕೊಂಡು ಅರೋಪಿತರ ವಿರುದ್ದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಕಳ್ಳತನವಾದ ದಿನದಂದು ಯಾವ ಮನೆಯಲ್ಲಿ ಇದ್ದೇನು, ಅದು ಯಾರಿಗೆ ಸಂಬಂಧಿಸಿರುತ್ತದೆ ಎನ್ನುವ ಬಗ್ಗೆ ದೂರಿನಲ್ಲಿ ಹೇಳಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಪ್ರಕರಣಕ್ಕೆ ಅನುಕೂಲವಾಗುವಂತೆ ಆರೋಪಿತರ ವಿರುದ್ದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 2 ಮತ್ತು 3 ನೇ ಆರೋಪಿ ಪರ ವಕೀಲರಿಂದಃ**

8. ನನಗೆ ಕನ್ನಡ ಓದಲೂ ಬರೆಯಲು ಬರುವುದಿಲ್ಲ. ನಿಪಿ–1 ರಲ್ಲಿರುವ ಸಂಗತಿಗಳು ನನಗೆ ಗೊತ್ತಿಲ್ಲ. ನಿಪಿ–1 ನ್ನು ಪೊಲೀಸರು ಬರೆದುಕೊಂಡಿರುತ್ತಾರೆ. ಪೊಲೀಸರು ನಮ್ಮ ಮನೆಗೆ ಬಂದ ದಿನಾಂಕ, ತಿಂಗಳು ನನಗೆ ಹೇಳಲು ಆಗುವುದಿಲ್ಲ. ನಮ್ಮ ಮನೆಗೆ ಬಂದ ಪೊಲೀಸರ ಹೆಸರು ನನಗೆ ಹೇಳಲು ಆಗುವುದಿಲ್ಲ. ನಮ್ಮ ಮನೆಯಲ್ಲಿ ನಾನು, ನನ್ನ ಮಗ ಮತ್ತು ಸೊಸೆ ವಾಸವಾಗಿದ್ದೇವೆ. ನಮ್ಮ ಮನೆ ಕಳ್ಳತನವಾದ ಸಮಯದಲ್ಲಿ ನನ್ನ ಮಗ ಮತ್ತು ಸೊಸೆ ಊರಿನಲ್ಲಿ ಇರಲಿಲ್ಲ. ಕಳ್ಳತನ ಮಾಡಿದವರ ಹೆಸರು ಮತ್ತು ವಿಳಾಸ ನನಗೆ ಗೊತ್ತಿಲ್ಲ. ಕಳ್ಳತನ ಮಾಡಿದ ವ್ಯಕ್ತಿಗಳನ್ನು ಪೊಲೀಸರು ನಮ್ಮ ಮನೆಗೆ ಕರೆದುಕೊಂಡು ಬಂದಿದ್ದರು. ಅವರು ಹೆಸರು ಮತ್ತು ವಿಳಾಸವನ್ನು ಪೊಲೀಸರು ನನಗೆ ಹೇಳಿರುವುದಿಲ್ಲ. ಪೊಲೀಸರು ನಮ್ಮ ಮನೆಗೆ ಬಂದ ಸಮಯದಲ್ಲಿ ಏನು ಬರವಣಿಗೆ ಮಾಡಿಕೊಂಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನಮ್ಮ ಮನೆಗೆ ಬಂದ ಸಮಯದಲ್ಲಿ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಪೊಲೀಸರು ನಾನು ದೂರು ಕೊಟ್ಟ ದಿನದಂದು ನಮ್ಮ ಮನೆಗೆ ಬಂದಿದ್ದರು. ಪೊಲೀಸರು ಮುಂಜಾನೆ 8.00 ಗಂಟೆಗೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಕಳ್ಳತನವಾದ ದಿನದಂದು ನಾನು ಆ ಮನೆಯಲ್ಲಿ ಇರಲಿಲ್ಲ. ಸದರಿ ಮನೆಯಲ್ಲಿ ನಾನು ಬಹಳ ವರ್ಷಗಳಿಂದ ವಾಸವಾಗಿದ್ದೇನೆ. ನನ್ನ ಮನೆ ಮುಂಚೆ ಯಾವಾಗಲೂ ಕಳ್ಳತನ ಆಗಿರುವುದಿಲ್ಲ. ನನ್ನ ಮಗ ಮತ್ತು ಸೊಸೆ ಹೊಸದಾಗಿ ಮದುವೆಯಾಗಿದ್ದರಿಂದ ಊರಿಗೆ ಹೋಗಬೇಕಾದರೆ ತಮಗೆ ಸಂಬಂಧಿಸಿದ ಎಲ್ಲಾ ಬಂಗಾರದ ಮತ್ತು ಬೆಳ್ಳಿ ಆಭರಣಗಳನ್ನು ತೆಗೆದುಕೊಂಡು ಹೋಗಿದ್ದರು ಎಂದರೆ ಸರಿಯಲ್ಲ. ನಮ್ಮ ಮನೆಯ ಸುತ್ತ ಮುತ್ತ ನಮ್ಮ ಅಣ್ಣ ತಮ್ಮಂದಿರ ಮನೆಗಳು ಇರುತ್ತವೆ. ನಮ್ಮ ಅಣ್ಣ ತಮ್ಮಂದಿರ ಮನೆ ನಮ್ಮ ಮನೆಗೆ ಹೊಂದಿಕೊಂಡು ಇರುತ್ತದೆ.

9. ನಾನು ಮನೆಯ ಬಾಗಿಲನ್ನು ಹಾಕಿಕೊಂಡು ಬೇರೆ ಮನೆಗೆ ಹೋದ ಸಮಯದಲ್ಲಿ ರಾತ್ರಿ ಕಳ್ಳತನವಾಗಿರುತ್ತದೆ ಎಂದು ಸುಳ್ಳು ಸಂಗತಿಗಳನ್ನು ಸೃಷ್ಟಿಸಿಕೊಂಡು, ಪೊಲೀಸ್ ಠಾಣೆಯಲ್ಲಿ ಸುಳ್ಳು ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ನಮ್ಮ ಮನೆಯಲ್ಲಿ ಯಾವುದೇ ಕಳ್ಳತನವಾಗದೇ ಇದ್ದರೂ ಸಹ ಸುಳ್ಳು ದೂರನ್ನು ನೀಡಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರಿಗೂ ಹಾಗೂ ಈ ಪ್ರಕರಣಕ್ಕೂ ಯಾವುದೇ ರೀತಿಯ ಸಂಬಂಧ ಇರದೇ ಇದ್ದರೂ ಸಹ ಪೊಲೀಸರ ಮಾತು ಕೇಳಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ** ಇಲ್ಲ.

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ.